# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಪಿ.ಎಸ್.ಕೊಣ್ಣೂರ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಬೈಲಹೊಂಗಲ, ಬೆಳಗಾವಿ ಜಿಲ್ಲೆ (ಪ್ರಸ್ತುತ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಕರ್ನಾಟಕ ನೀರಾವರಿ ನಿಗಮ, ರಾಮದುರ್ಗ) ಇವರ ವಿರುದ್ಧ ಇಲಾಖಾ ವಿಚಾರಣೆಯನ್ನು ನಡೆಸಲು ವಿಚಾರಣಾಧಿಕಾರಿ ಮತ್ತು ಮಂಡನಾಧಿಕಾರಿಗಳನ್ನು ನೇಮಿಸುವ ಕುರಿತು.

**ಓದಲಾಗಿದೆ:-** 1 ಸರ್ಕಾರದ ಸಮ ಸಂಖ್ಯೆಯ ಕಾರಣ ಕೇಳುವ ನೋಟೀಸ್ ದಿನಾಂಕ:23.12.2013

2. ಶ್ರೀ ಪಿ.ಎಸ್.ಕೊಣ್ಣೂರ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಬೈಲಹೊಂಗಲ, ಬೆಳಗಾವಿ ಜಿಲ್ಲೆ ಇವರ ಉತ್ತರ/ರಕ್ಷಣಾ ಹೇಳಿಕೆ ದಿನಾಂಕ:22.01.2014

****

**ಪ್ರಸ್ತಾವನೆ:**

ಶ್ರೀ ಪಿ.ಎಸ್.ಕೊಣ್ಣೂರ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಕರ್ನಾಟಕ ನೀರಾವರಿ ನಿಗಮ, ಎಂ.ಎಲ್.ಬಿ.ಸಿ. ಉಪ ವಿಭಾಗ-ನಂ-6 ಉಪ ವಿಭಾಗ, ರಾಮದುರ್ಗ ಇವರು ಈ ಹಿಂದೆ ಬೆಳಗಾವಿ ಜಿಲ್ಲೆಯ ಬೈಲಹೊಂಗಲ ತಾಲ್ಲೂಕು ಪಂಚಾಯತ್‌ನಲ್ಲಿ ಕಾರ್ಯನಿರ್ವಾಹಕ ಅಧಿಕಾರಿಯಾಗಿ ಕರ್ತವ್ಯನಿರ್ವಹಿಸುತ್ತಿದ್ದಾಗ, ಫೆಬ್ರವರಿ-2010ನೇ ಮಾಹೆಯಲ್ಲಿ ತಾಲ್ಲೂಕು ಪಂಚಾಯತ್ ಕಾರ್ಯಾಲಯದ ಸಿಬ್ಬಂದಿಗಳ/ಕಾರ್ಯದರ್ಶಿಗಳ ವೇತನ ವೆಚ್ಚದಲ್ಲಿ ರೂ. 42.55 ಲಕ್ಷಗಳನ್ನು ಹೆಚ್ಚುವರಿಯಾಗಿ ಸೆಳೆದಿರುವ, ಸಿಬ್ಬಂದಿಗಳ ವೇತನ ವೆಚ್ಚದ ಅನುದಾನದಲ್ಲಿ ಸರ್ಕಾರದ ಪೂರ್ವಾನುಮತಿ ಪಡೆಯದೇ ರೂ.4.00ಲಕ್ಷಗಳ ವೆಚ್ಚದಲ್ಲಿ ಕಚೇರಿಗೆ ಹೊಸವಾಹನ ಖರೀದಿಸಿರುವ, ಹಾಗೂ ಇನ್ನಿತರೆ ಗುರುತರವಾದ ಆರೋಪಗಳಿಗೆ/ಕರ್ತವ್ಯಲೋಪ/ ನಿರ್ಲಕ್ಷತನ/ ಬೇಜವಾಬ್ದಾರಿತನಗಳಿಗೆ ಸಂಬಂಧಿಸಿದಂತೆ ಸದರಿ ಅಧಿಕಾರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ), ನಿಯಮಾವಳಿಗಳು-1957ರ ನಿಯಮ-11ರ ಪ್ರಕಾರ ಅನುಬಂಧ-1 ರಿಂದ 4 ನ್ನು ಒಳಗೊಂಡ ಕಾರಣ ಕೇಳುವ ನೋಟೀಸ್‌ನ್ನು ಜಾರಿಮಾಡಿ ಅವರ ರಕ್ಷಣಾ ಹೇಳಿಕೆಯನ್ನು ಸಲ್ಲಿಸುವಂತೆ ಸೂಚಿಸಲಾಗಿತ್ತು. ಮೇಲೆ ಓದಲಾದ(2)ರ ರಕ್ಷಣಾ ಹೇಳಿಕೆಯಲ್ಲಿ ತಮ್ಮ ಮೇಲಿನ ಎಲ್ಲಾ ಆರೋಪಗಳನ್ನು ಅಲ್ಲಗಳೆಯುತ್ತಾ, ತಮ್ಮ ಮೇಲಿನ ಉದ್ದೇಶಿತ ಇಲಾಖಾ ವಿಚಾರಣೆಯನ್ನು ಕೈಬಿಡುವಂತೆ ಕೋರಿರುತ್ತಾರೆ. ಅಧಿಕಾರಿಯು ನೀಡಿರುವ ರಕ್ಷಣಾ ಹೇಳಿಕೆಯನ್ನು ಪರಿಶೀಲಿಸಿದ್ದು, ಅಧಿಕಾರಿಯು ನೀಡಿರುವ ಉತ್ತರವು

ಸಮರ್ಥನೀಯವಾಗಿಲ್ಲದೇ ಇರುವುದರಿಂದ, ಆರೋಪಗಳ ಸತ್ಯಾಸತ್ಯೆಯನ್ನು ತಿಳಿಯಲು ಸುಧೀರ್ಘವಾದ ವಿಚಾರಣೆಯನ್ನು ನಡೆಸಲು, ಇಲಾಖಾ ವಿಚಾರಣಾಧಿಕಾರಿ ಹಾಗೂ ಮಂಡನಾಧಿಕಾರಿಯನ್ನು ನೇಮಿಸಲು ಸರ್ಕಾರವು ತೀರ್ಮಾನಿಸಿದೆ. ಆದುದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 29 ವಿಸೇಐ 2013 ಬೆಂಗಳೂರು**
**ದಿನಾಂಕ:10-02-2014**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಶ್ರೀ ಪಿ.ಎಸ್.ಕೊಣ್ಣೂರ, ಇವರು ಈ ಹಿಂದೆ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಬೈಲಹೊಂಗಲ, ಬೆಳಗಾವಿ ಜಿಲ್ಲೆ, (ಪ್ರಸ್ತುತ ಸಹಾಯಕ ಕಾರ್ಯಪಾಲಕ ಇಂಜನಿಯರ್, ಕರ್ನಾಟಕ ನೀರಾವರಿ ನಿಗಮ, ರಾಮದುರ್ಗ) ಇಲ್ಲಿ ಕರ್ತವ್ಯನಿರ್ವಹಿಸುತ್ತಿದ್ದಾಗ ಎಸಗಿರುವ ದುರ್ನಡತೆಗಳ ಬಗ್ಗೆ ಇವರ ವಿರುದ್ಧದ ಆರೋಪಗಳ ಕುರಿತು ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ), ನಿಯಮಾವಳಿಗಳು 1957ರ ನಿಯಮ 11ರ ಪ್ರಕಾರ ಇಲಾಖಾ ವಿಚಾರಣೆಯನ್ನು ನಡೆಸಲು ಅದೇ ನಿಯಮಾವಳಿಗಳ ನಿಯಮ-11(2)ರ ಪ್ರಕಾರ ಶ್ರೀ ಕೆ.ಆರ್.ಕೊಡಗಾನೂರ್, ನಿವೃತ್ತ ಜಿಲ್ಲಾ ನ್ಯಾಯಾಧೀಶರು, ಇವರನ್ನು ವಿಚಾರಣಾಧಿಕಾರಿಯನ್ನಾಗಿ ಹಾಗೂ ಅದೇ ನಿಯಮಾವಳಿಗಳ ನಿಯಮ-11(5)(ಸಿ)ರ ಪ್ರಕಾರ ಸಹಾಯಕ ಕಾರ್ಯದರ್ಶಿ, (ಅಭಿವೃದ್ಧಿ) ಜಿಲ್ಲಾ ಪಂಚಾಯತ್, ಬೆಳಗಾವಿ ಇವರನ್ನು ಮಂಡನಾಧಿಕಾರಿಯನ್ನಾಗಿ ಸರ್ಕಾರವು ನೇಮಿಸಿದೆ.

ವಿಚಾರಣಾಧಿಕಾರಿಯವರು ಈ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ), ನಿಯಮಾವಳಿಗಳು-1957ರ ನಿಯಮ-11ರಲ್ಲಿ ನಿಗದಿ ಪಡಿಸಿರುವ ಕಾರ್ಯವಿಧಾನದ ಪ್ರಕಾರ ವಿಚಾರಣೆ ಜರುಗಿಸಿ ವರದಿಯನ್ನು 4 ತಿಂಗಳೊಳಗಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ವಿಚಾರಣಾಧಿಕಾರಿಗಳು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ನಿಯಮಾನುಸಾರ ಸಂಭಾವನೆಯನ್ನು ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

(ಚಂದ್ರಶೇಖರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ,**

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಲೋಕೋಪಯೋಗಿ/ಜಲಸಂಪನ್ಮೂಲ/ಸಣ್ಣ ನೀರಾವರಿ ಇಲಾಖೆ, ವಿಕಾಸ ಸೌಧ, ಬೆಂಗಳೂರು.
3) ಜಿಲ್ಲಾಧಿಕಾರಿಳು, ಬೆಳಗಾವಿ ಜಿಲ್ಲೆ, ಬೆಳಗಾವಿ.
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಳಗಾವಿ ಜಿಲ್ಲೆ
5) ಶ್ರೀ ಕೆ.ಆರ್.ಕೊಡಗಾನೂರ್ , ನಿವೃತ್ತ ಜಿಲ್ಲಾ ನ್ಯಾಯಾಧೀಶರು, ನಂ.83, ಶಾಹು ನಗರ, ಬೆಳಗಾವಿ ಜಿಲ್ಲೆ, ಬೆಳಗಾವಿ,
6) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ, ಕಾಫಿ ಬೋರ್ಡ್ ಕಟ್ಟಡ, 4 ನೇ ಮಹಡಿ, ಡಾ॥ ಅಂಬೇಡ್ಕರ್ ವೀದಿ, ಬೆಂಗಳೂರು-01.
7) ಸಹಾಯಕ ಕಾರ್ಯದರ್ಶಿ,(ಅಭಿವೃದ್ಧಿ) ಜಿಲ್ಲಾ ಪಂಚಾಯತ್, ಬೆಳಗಾವಿ ಜಿಲ್ಲೆ, ಬೆಳಗಾವಿ.
8) ಶ್ರೀ ಪಿ.ಎಸ್.ಕೊಣ್ಣೂರ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಕರ್ನಾಟಕ ನೀರಾವರಿ ನಿಗಮ, ರಾಮದುರ್ಗ

**ಪ್ರತಿ ಮಾಹಿತಿಗಾಗಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಕಾರ್ಯದರ್ಶಿ (ಪಂ.ರಾಜ್)/ ಅಪರ ಕಾರ್ಯದರ್ಶಿ (ಆಡಳಿತ) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
3) ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.